2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.

<u>ಸಿ.ಸಿ.ನಂ. **4/2019**</u>

ದಿನಾಂಕಃ **19.07.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು ಃ | ಓಂಕಾರಪ್ಪ | ಚಾಸಾ-21, ಪ್ರಾಸ.-3 |
| ತಂದೆಯ ಹೆಸರುಃ | ರುದ್ರಪ್ಪ | |
| ವಯಸ್ಸು ಃ | 55 ವರ್ಷ | |
| ಉದ್ಯೋಗ ಃ | ಕೂಲಿ | |
| ವಾಸ ಃ | ಒಕ್ಕಲಗೆರೆ | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ಆರೋಪಿ ನನಗೆ ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಅಪಘಾತವು ಯಾರ ತಪ್ಪಿನಿಂದ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ಅಪಘಾತದಿಂದ ನನಗೆ ಯಾವುದೇ ಗಾಯವಾಗಿರುವುದಿಲ್ಲ. ನಾನು ಪೋಲಿಸರಿಗೆ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)

<u>ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ</u>

ದಿಃ 16.01.2018 ರಂದು ವಕ್ಕಲಗೆರೆಯಿಂದ ಸಂಜೆ 6.00 ಗಂಟೆ ಸಮಯದಲ್ಲಿ ಆರೋಪಿಯ ಮಹಿಂದ್ರಾ ಪಿಕಪ್ ವಾಹನದ ಟೈರ್ ಪಂಚರ್ ಆಗಿದ್ದು ಸ್ಟೆಪ್ನಿ ಬದಲಾಯಿಸಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಟೈರ್ ಗೆ ಪಂಚರ್ ಹಾಕಿಸಲು ವಕ್ಕಲಗೆರೆಯಿಂದ ಬೆಲಗೂರಿಗೆ ಹೋಗಿರುತ್ತೇನೆ ಎಂದರೆ ಸರಿಯಲ್ಲ. ಬೆಲಗೂರಿನಿಂದ ವಾಪಸ್ಸು ಬರುವಾಗ ಆರೋಪಿಯು ತನ್ನ ವಾಹನವನ್ನು ಅತೀವೇಗದಿಂದ ಚಲಾಯಿಸಿ ಎದುರುಗಡೆ ಬರುತ್ತಿದ್ದ ಮೋಟರ್ ಬೈಕಿಗೆ ಡಿಕ್ಕಿಪಡಿಸಿರುತ್ತಾನೆ ಎಂದರೆ ಸರಿಯಲ್ಲ. ಪರಿಣಾಮವಾಗಿ ಪಿಕಪ್ ವಾಹನವು 25 ಮೀಟರ್ ದೂರಕ್ಕೆ ಹೋಗಿ ರಸ್ತೆಯ ಬಲಬದಿ ಚರಂಡಿಗೆ ಮಕಾಡೆ ಬಿದ್ದಿತ್ತು ಎಂದರೆ ಸರಿಯಲ್ಲ. ಅಪಘಾತದಿಂದ ನನ್ನ ಮುಖಕ್ಕೆ ಮತ್ತು ಬೆನ್ನಿಗೆ ಪೆಟ್ಟಾಗಿತ್ತು ಎಂದರೆ ಸರಿಯಲ್ಲ. ಆರೋಪಿಯ ತಲೆಗೆ, ಎದೆಗೆ, ಬೆನ್ನಿಗೆ, ಕಾಲಿಗೆ ಪೆಟ್ಟಾಗಿತ್ತು ಎಂದರೆ ಸರಿಯಲ್ಲ. ಆರೋಪಿಯು ಡಿಕ್ಕಿಪಡಿಸಿದ ಬೈಕಿನಲ್ಲಿ 4 ಜನ ಪ್ರಯಾಣಿಸುತ್ತಿದ್ದರು ಎಂದರೆ ಸರಿಯಲ್ಲ. ಅವರಿಗೂ ಗಾಯವಾಗಿತ್ತು ಎಂದರೆ ಸರಿಯಲ್ಲ. ಪರಿಣಾಮವಾಗಿ ಬೈಕಿನಲ್ಲಿ ಪ್ರಯಾಣಿಸುತ್ತಿದ್ದ ರಘು ಸ್ಥಳದಲ್ಲೇ ಮೃತಪಟ್ಟಿರುತ್ತಾರೆ ಹಾಗೂ ಮಂಜುನಾಥ ರವರು ಆಸ್ಪತ್ರೆಗೆ ಕರೆದುಕೊಂಡು ಹೋಗುವಾಗ ದಾರಿಯಲ್ಲಿ ಮೃತಪಟ್ಟಿರುತ್ತಾನೆ ಎಂದರೆ ಸರಿಯಲ್ಲ. ನಮ್ಮನ್ನು ಮತ್ತು ಬೈಕಿನಲ್ಲಿ ಪ್ರಯಾಣಿಸುತ್ತಿದ್ದ ಚಾಸಾ-1, ಮತ್ತು 20 ರವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿ ಚಾಲಾಯಿಸುತ್ತಿದ್ದ ವಾಹನ ಸಂಖ್ಯೆ ಕೆಎ-18 ಬಿ-5423 ಆಗಿರುತ್ತದೆ ಎಂದರೆ ಸರಿಯಲ್ಲ. ಬೈಕಿನ ನೋಂದಣಿ ಸಂಖ್ಯೆ ಕೆಎ-19 ಇಜಿ-1147 ಆಗಿರುತ್ತದೆ

ಎಂದರೆ ಸರಿಯಲ್ಲ. ಘಟನೆಯ ಬಗ್ಗೆ ನಾನು ದಿಃ 02.02.2018 ರಂದು ಈಗ ಓದಿ ಹೇಳಿದಂತೆ ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆ ಭಾಗವನ್ನು ನಿಪಿ-6 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ ಇರುವುದಿಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಎ ಒ

Sd/-
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.